JUNE 27, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಅಪ್ರತಿಮ ಆಡಳಿತಗಾರ, ಬೆಂಗಳೂರು ಮಹಾನಗರದ ನಿರ್ಮಾತೃ, ನಾಡಪ್ರಭು ಕೆಂಪೇಗೌಡರ, 516ನೇ ಜಯಂತ್ಯುತ್ಸವ, ಇಂದು ನಾಡಿನಾದ್ಯಂತ ಆಚರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲೂಕು, ಆವತಿ ಗ್ರಾಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ, ಆಯೋಜಿತ, ಕೆಂಪೇಗೌಡ ಜ್ಯೋತಿ ರಥಯಾತ್ರೆಗೆ, ಚನ್ನಕೇಶವ ದೇವಾಲಯದಲ್ಲಿ ವಿಶೇ ´ ಪೂಜೆ ಸಲ್ಲಿಸುವ ಮೂಲಕ ಆಹಾರ ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್.ಮುನಿಯಪ್ಪ, ಚಾಲನೆ ನೀಡಿದರು. ಈ ಸಂದರ್ಭ ಮಾತನಾಡಿದ ಅವರು, ಕೆಂಪೇಗೌಡರ ದೂರದೃಷ್ಟಿಯ ಫಲವಾಗಿ, ಇಂದು ಬೆಂಗಳೂರು ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಕೆರೆ ಕುಂಟೆಗಳನ್ನು ನಿರ್ಮಿಸುವ ಮೂಲಕ ಪರಿಸರ ಕಾಳಜಿ ಹೊಂದಿದ್ದ ಕೆಂಪೇಗೌಡರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕಿದೆ ಎಂದರು. ಬೆಂಗಳೂರು ಸುಮನಹಳ್ಳಿ ಬಳಿಯ, ಬಾಬು ಜಗಜೀವನರಾಮ ಭವನದಲ್ಲಿ, ಈ ಮಧ್ಯಾಹ್ನ 12.30 ಕ್ಕೆ ಪ್ರಧಾನ ಕಾರ್ಯಕ್ರಮ ಆಯೋಜಿತವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಪಾಲ್ಗೊಳ್ಳಲಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿರುವ ಕೃಷಿ ಖಾತೆ ಸಚಿವ ಎನ್. ಚಲುವರಾಯ ಸ್ವಾಮಿ ಅವರು, ಕರ್ನಾಟಕ ಸೋಪ್ಸ್ ಮತ್ತು ಮಾರ್ಜಕ ಸಂಸ್ಥೆಗೆ, ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದಿದ್ದಾರೆ.

<><><>

ಧ್ವನಿ: ಚಲುವರಾಯಸ್ವಾಮಿ 38 ಸೆಕೆಂದುಗಳು

<><><>

'ಸಕಾಲ ಸೇವೆ' ಒದಗಿಸುವಲ್ಲಿ, ಮೇ ತಿಂಗಳಾಂತ್ಯಕ್ಕೆ, ಕಲಬುರಗಿ ಜಿಲ್ಲೆ ತೃತೀಯ ಸ್ಥಾನ ಗಳಿಸಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ, ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಳೆದ 6 ತಿಂಗಳಲ್ಲಿ, ಕಲಬುರಗಿ ಜಿಲ್ಲೆಯ, ವಿವಿಧ ಇಲಾಖೆಗಳಲ್ಲಿ, 6 ಲಕ್ಷ 38 ಸಾವಿರದ 840 ಅರ್ಜಿಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡಿ, ಶೇಕಡ 99 ದಶಾಂಶ 6–7 ರಷ್ಟು, ಪ್ರಗತಿ ಸಾಧಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಎಕ್ಸ್ ಮಾಧ್ಯಮದಲ್ಲಿ ಪ್ರಕಟಿಸಿದ್ದಾರೆ.

<><><>

ಕಟ್ಟಡ ನಕ್ಷೆ ಮಂಜೂರು, ಸ್ವಾಧೀನ ಪ್ರಮಾಣಪತ್ರ ಇಲ್ಲದೆ, ನೀರು ಹಾಗೂ ವಿದ್ಯುತ್ ಸಂಪರ್ಕ ನೀಡುವಂತಿಲ್ಲ ಎಂದು, ಸರ್ವೋಚ್ಚ ನ್ಯಾಯಾಲಯ, ಇತ್ತೀಚೆಗೆ ತೀರ್ಪು ನೀಡಿದೆ. ಹೀಗಾಗಿ, ಅನುಮತಿ ಇಲ್ಲದೆ, ಜನ ಮನೆ ಕಟ್ಟಬಾರದು ಎಂದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಎಕ್ಸ್ ಮಾಧ್ಯಮದಲ್ಲಿ ಸ್ಪಷ್ಟ ಪಡಿಸಿದ್ದಾರೆ.

<><><>

ಧಾರವಾಡ, ರಂಗಾಯಣ ಸಮುಚ್ಚಯ ಸಭಾಭವನದಲ್ಲಿ, ಇಂದು ಸಂಜೆ 6 ಗಂಟೆಗೆ, ಕವಿತಾ ಕಲಾ ತಂಡ ಮೈಸೂರು, ಪ್ರಸ್ತುತಪಡಿಸುವ, ಗಣೇಶ ಅಮೀನಗಡ ನಿರ್ದೇಶನದ 'ಕೌದಿ', ಏಕವ್ಯಕ್ತಿ ನಾಟಕ ಪ್ರದರ್ಶನಗೊಳ್ಳಲಿದೆ. ಹಿರಿಯ ಸಾಹಿತಿ ಡಾಕ್ಟರ ವೀರಣ್ಣ ರಾಜೂರ ನಾಟಕದ 40 ನೇ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ.

<><><>

ಹಂಪಿ ಕನ್ನಡ ವಿಶ್ವವಿದ್ಯಾಲಯದ ಸಂಗೀತ ಮತ್ತು ನೃತ್ಯ ವಿಭಾಗ ಹಾಗೂ ಶಿರಸಿಯ, ಎಂ.ಎಂ ಕಲಾ ಮತ್ತು ವಿಜ್ಞಾನ ಮಹಾವಿದ್ಯಾಲಯ ಸಹಯೋಗದಲ್ಲಿ ಆಯೋಜಿತ, 'ಉತ್ತರ ಕನ್ನಡ ಜಿಲ್ಲೆಯ ಸಂಗೀತ ಪರಂಪರೆ' ರಾಜ್ಯ ಮಟ್ಟದ ವಿಚಾರ ಸಂಕಿರಣ ಕಾರ್ಯಕ್ರಮಕ್ಕೆ ಎಂ.ಎಂ ಕಾಲೇಜು ಆವರಣದಲ್ಲಿ ಇಂದು ಚಾಲನೆ ನೀಡಲಾಯಿತು.

<><><>

ವಿಜಯಪುರ ಜಿಲ್ಲೆಯ ಕೃಷ್ಣ, ಭೀಮ ಮತ್ತು ಡೋಣಿ ನದಿ ನೀರಿನ ಒಳ ಹರಿವಿನ ಪ್ರಮಾಣದಲ್ಲಿ, ಹೆಚ್ಚಳವಾಗುವ ಸಾಧ್ಯತೆ ಇದೆ. ನದಿ ಪಾತ್ರದ ಗ್ರಾಮಗಳ ಜನ, ಪ್ರವಾಹ ಪರಿಸ್ಥಿತಿ ಬಗ್ಗೆ, ಮುನ್ನೆಚ್ಚರಿಕೆ ವಹಿಸುವಂತೆ, ಜಿಲ್ಲಾಧಿಕಾರಿ ಟಿ.ಭೂಬಾಲನ್ ತಿಳಿಸಿದ್ದಾರೆ.

<><><>

ಆ ಾಢ ಮಾಸದ, ವಿಶೇಷ ಪರ್ವ ಆಷಾಢ ಶುಕ್ರವಾರದ ಹಿನ್ನೆಲೆ, ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಆಗಮಿಸಿದ, ಸಹಸ್ರಾರು ಭಕ್ತಾದಿಗಳು ಶ್ರೀ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದರು. ಇಂದು ಮುಂಜಾನೆ ತಾಯಿ ಚಾಮುಂಡೇಶ್ವರಿಗೆ ಪಂಚಾಮೃತ ಅಭಿಷೇಕ ಹಾಗೂ ವಿಶೇಷ ಅರ್ಚನೆ ನಡೆಯಿತು. ಸಾರ್ವಜನಿಕರ ಸುರಕ್ಷತೆಗಾಗಿ, ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಲಲಿತಮಹಲ್ ಅರಮನೆ ಆವರಣದಿಂದ, ಚಾಮುಂಡಿ ಬೆಟ್ಟಕ್ಕೆ ಉಚಿತ ಕೆ.ಎಸ್.ಆರ್.ಟಿ.ಸಿ ಬಸ್ ಸೇವೆ ಕಲ್ಪಿಸಲಾಗಿತ್ತು.

<><><>

ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ಮೂಲಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ 29 ರಂದು ಬೆಳಗ್ಗೆ 11 ಗಂಟೆಗೆ, ದೇಶ ವಿದೇಶಗಳಲ್ಲಿರುವ ಭಾರತೀಯರೊಂದಿಗೆ, ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು ಮನದ ಮಾತು ಸರಣಿಯ 123 ನೇ ಆವೃತಿಯಾಗಿದೆ. ಜನತೆ ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ನಮೋ ಆ್ಯಪ್ ಅಥವಾ My Gov.in ಜಾಲತಾಣದ ಮೂಲಕ ಹಂಚಿಕೊಳ್ಳಬಹುದು. ಉಚಿತ ದೂರವಾಣಿ ಸಂಖ್ಯೆ 1800–11–7800ಗೆ ಕರೆ ಮಾಡಿ, ತಮ್ಮ ಸಂದೇಶವನ್ನು ತಿಳಿಸಬಹುದಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>